ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ ಎಡಿಎಂ2(1) ಶೈ.ವ.ನಿ-01/2021-22. ದಿನಾಂಕ:04.06.2021

## ಸುತ್ತೋಲೆ

ವಿಷಯ:-ರಾಜ್ಯದ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ 2021-22 ನೇ ಸಾಲಿನ ಶೈಕ್ಷಣಿಕ ವರ್ಷ ನಿಗದಿಪಡಿಸುವ ಬಗ್ಗೆ.

ಉಲ್ಲೇಖ:-1. ಈ ಕಚೇರಿ ಸುತ್ತೋಲೆ ಸಂಖ್ಯೆ: ಸಿ4(6) ಶೈ ಮತ್ತು ರಜೆ.ಅ.ನಿಗದಿ-35/2020-21 ದಿನಾಂಕ:20-04-2021 ಮತ್ತು ದಿನಾಂಕ:31-05-2021.

2. ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ 158. ಟಿಎನ್ಆರ್ 2020. ದಿನಾಂಕ:07-05-2021, 21-05-2021 ಮತ್ತು 03-06-2021.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22 ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದಿನಾಂಕ: 15-06-2021 ರಿಂದ ಪ್ರಾರಂಭಿಸಲು ಉಲ್ಲೇಖ-01 ರಂತೆ ಸೂಚಿಸಲಾಗಿತ್ತು. ಪ್ರಸ್ತುತ ಕೋವಿಡ್-19 ಅನ್ನು ನಿಯಂತ್ರಿಸಲು ಉಲ್ಲೇಖ-02 ರಂತೆ ಕಠಿಣ ನಿರ್ಬಂಧಗಳನ್ನು ವಿಧಿಸಲಾಗಿರುವ ಹಿನ್ನಲೆಯಲ್ಲಿ ದಿನಾಂಕ: 14-06-2021 ರವರೆಗೆ ಶಾಲಾ ತರಗತಿಗಳನ್ನು ಪ್ರಾರಂಭಿಸಲು ಅವಕಾಶ ಇರುವುದಿಲ್ಲ.

ಮುಂದುವರೆದು, ಪ್ರಸಕ್ತ ತಲೆದೋರಿರುವ ಈ ಪ್ರತಿಕೂಲ ಸನ್ನಿವೇಶ ಮುಂದುವರೆಯುವ ಸಾಧ್ಯತೆಯನ್ನು ಗಮನದಲ್ಲಿ ಇರಿಸಿಕೊಂಡು ತಾತ್ಕಾಲಿಕವಾಗಿ ದಿನಾಂಕ: 01-07-2021 ರಿಂದ ಅನುಷ್ಠಾನಕ್ಕೆ ಬರುವಂತೆ ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಯೋಜಿಸಲಾಗಿದೆ.

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 2021-22 ನೇ ಶೈಕ್ಷಣಿಕ ಸಾಲಿನಲ್ಲಿ ಏಕರೂಪದ ಶೈಕ್ಷಣಿಕ ಚಟುವಟಿಕೆಗಳನ್ನು ಜಾರಿಗೊಳಿಸಲು ಅನುವಾಗುವಂತೆ, ಶೈಕ್ಷಣಿಕ ಅವಧಿಗಳು, ರಜಾ ದಿನಗಳು ಮತ್ತು ವಾರ್ಷಿಕ ಕಾರ್ಯಸೂಚಿಯನ್ನು ಈ ಕೆಳಕಂಡಂತೆ ನಿಗದಿಪಡಿಸಲಾಗಿದ್ದು, ಎಲ್ಲಾ ಶಾಲೆಗಳಲ್ಲಿ ಅನುಷ್ಠಾನಗೊಳಿಸಲು ತಿಳಿಸಿದೆ.

### ಶಾಲಾ ಕರ್ತವ್ಯದ ದಿನಗಳು.

| | |
|---|---|
| ಮೊದಲನೇ ಅವಧಿ | ದಿನಾಂಕ: 01.07.2021 ರಿಂದ 09.10.2021 |
| ಎರಡನೇ ಅವಧಿ | ದಿನಾಂಕ: 21.10.2021 ರಿಂದ 30.04.2022 |

### ರಜಾ ದಿನಗಳು.

| | |
|---|---|
| ದಸರಾ ರಜೆ. | ದಿನಾಂಕ:10-10-2021 ರಿಂದ 20-10-2021 |
| ಬೇಸಿಗೆ ರಜೆ | ದಿನಾಂಕ::01.05.2022 ರಿಂದ 28.05.2022 |

ಮೇಲ್ಕಂಡಂತೆ 2021-22 ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಶಾಲಾ ಕರ್ತವ್ಯದ ಅವಧಿಯನ್ನು ಮತ್ತು ರಜಾ ಅವಧಿಯನ್ನು ಪರಿಗಣಿಸಿ ನಿಗದಿಪಡಿಸಲಾಗಿರುವ ಮಾಸಿಕ ಶಾಲಾ ಕರ್ತವ್ಯದ (ಬೋಧನಾ) ದಿನಗಳು ಮತ್ತು ರಜಾ ದಿನಗಳ ವಿವರಗಳು ಕೆಳಕಂಡಂತಿದೆ.

| ಕ್ರಸಂ. | ತಿಂಗಳು ಮತ್ತು ವರ್ಷ | ಲಭ್ಯವಿರುವ ತಿಂಗಳಿನ ಒಟ್ಟು ದಿನಗಳು | ಒಟ್ಟು ರಜಾ ದಿನಗಳು. | ಲಭ್ಯವಿರುವ ಶಾಲಾ ಕರ್ತವ್ಯದ ದಿನಗಳು |
|---|---|---|---|---|
| 01 | ಜುಲೈ – 2021 | 31 | 05 | 26 |
| 02 | ಆಗಸ್ಟ್ – 2021 | 31 | 06 | 25 |
| 03 | ಸೆಪ್ಟಂಬರ್ – 2021 | 30 | 05 | 25 |
| 04 | ಅಕ್ಟೋಬರ್ – 2021 | 31 | 15 | 16 |
| 05 | ನವಂಬರ್ – 2021 | 30 | 08 | 22 |
| 06 | ಡಿಸಂಬರ್ – 2021 | 31 | 04 | 27 |
| 07 | ಜನವರಿ – 2022 | 31 | 06 | 25 |
| 08 | ಫೆಬ್ರವರಿ – 2022 | 28 | 05 | 23 |
| 09 | ಮಾರ್ಚ್ – 2022 | 31 | 06 | 25 |
| 10 | ಏಪ್ರಿಲ್ – 2022 | 30 | 06 | 24 |
| | **ಒಟ್ಟು** | **304** | **66** | **238** |
| | **ವಿವೇಚನಾ ರಜೆಗಳು (ಸ್ಥಳೀಯ ರಜೆಗಳು)** | | | **–04** |
| | **ದಸರಾ ರಜೆ** | | | **–11** |
| | **ಶೈಕ್ಷಣಿಕ ಸಾಲಿನಲ್ಲಿ ಬೋಧನಾ-ಕಲಿಕೆ ಪ್ರಕ್ರಿಯೆಗೆ ಲಭ್ಯವಾಗುವ ಒಟ್ಟು ಶಾಲಾ ಕರ್ತವ್ಯದ ದಿನಗಳು** | | | **223** |

**<u>ನಿಬಂಧನೆಗಳು:</u>**

1. ಮಕ್ಕಳ ಶಾಲಾ ಪ್ರವೇಶಾತಿಯನ್ನು / ದಾಖಲಾತಿಯನ್ನು ಜೂನ್ 15 ರಿಂದ ಆರಂಭಿಸಿ ದಿನಾಂಕ: 31-08-2021 ರೊಳಗಾಗಿ ಮುಕ್ತಾಯಗೊಳಿಸತಕ್ಕದ್ದು.
2. ಕೋವಿಡ್-19 ರ ಪ್ರತಿಕೂಲ ಸನ್ನಿವೇಶದ ಹಿನ್ನಲೆಯಲ್ಲಿ ಶಾಲೆಗಳನ್ನು ಭೌತಿಕವಾಗಿ ಪ್ರಾರಂಭಿಸಲು ಪರಿಸ್ಥಿತಿ ಸಹಕಾರಿಯಾಗದಿದ್ದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪರ್ಯಾಯ ಮಾರ್ಗಗಳನ್ನು (ದೂರದರ್ಶನ, ಸಂವೇದ, ಬಾನುಲಿ, ಆನ್-ಲೈನ್ ಮತ್ತು ಇತರ ಆಫ್-ಲೈನ್ ಮಾರ್ಗಗಳ ಮುಖಾಂತರ) ಚಾಲನೆಗೊಳಿಸುವುದರ ಮೂಲಕ ಮಕ್ಕಳು ಪಾಠ-ಪ್ರವಚನಗಳಲ್ಲಿ ಪಾಲ್ಗೊಳ್ಳುವ ಮೂಲಕ ಕಲಿಕೆ ಮತ್ತು ಮೌಲ್ಯಮಾಪನ ಕಾರ್ಯದ ನಿರಂತರತೆಯನ್ನು ಕಾಯ್ದುಕೊಳ್ಳತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸಬಾರದು. ಪರ್ಯಾಯ ಮಾರ್ಗಗಳ ಮೂಲಕ ಶಿಕ್ಷಣ ನೀಡುವ ಕುರಿತು ವಿವರವಾದ ಮಾರ್ಗಸೂಚಿಯನ್ನು ನಂತರದಲ್ಲಿ ಹೊರಡಿಸಲಾಗುವುದು. ಮಕ್ಕಳ ಕಲಿಕೆಯ ಯೋಜನೆಯ ಪೂರ್ವತಯಾರಿಯನ್ನು ದಿನಾಂಕ: 15.06.2021 ರಿಂದ ಶಿಕ್ಷಕರು ಪ್ರಾರಂಭಿಸುವುದು.
3. ಪ್ರಾಥಮಿಕ ಶಾಲಾ ಸಮುದಾಯದತ್ತ ಶಾಲೆ ಕಾರ್ಯಕ್ರಮವನ್ನು ದಿನಾಂಕ:29-04-2022 ರಂದು ಹಾಗೂ ಪ್ರೌಢ ಶಾಲಾ ಸಮುದಾಯದತ್ತ ಶಾಲೆ ಕಾರ್ಯಕ್ರಮವನ್ನು ದಿನಾಂಕ:30-04-2022 ರಂದು ನಡೆಸುವುದು.

4. ರಾಷ್ಟ್ರೀಯ ಹಬ್ಬಗಳಾದ ಗಣರಾಜ್ಯೋತ್ಸವ, ಸ್ವಾತಂತ್ರ್ಯ ದಿನಾಚರಣೆ, ಗಾಂಧಿ ಜಯಂತಿ, ಡಾ ॥ ಬಿ.ಆರ್. ಅಂಬೇಡ್ಕರ್ ಜಯಂತಿ, ನಾಡ ಹಬ್ಬವಾದ ಕರ್ನಾಟಕ ರಾಜ್ಯೋತ್ಸವ ಮುಂತಾದವುಗಳನ್ನು ಆಯಾ ದಿನಗಳಂದು ಶಾಲೆಗಳಲ್ಲಿ ಕಡ್ಡಾಯವಾಗಿ ಆಚರಿಸುವುದು.
5. ಕ್ರಿಸ್‌ಮಸ್ ರಜೆ ಬೇಡಿಕೆಯನ್ನು ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳು ತಮ್ಮ ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಸಲ್ಲಿಸಿದಲ್ಲಿ ಈ ಬಗ್ಗೆ ಆಯಾ ಉಪನಿರ್ದೇಶಕರು(ಆಡಳಿತ) ರವರು ಆ ಕುರಿತು ಪರಿಶೀಲಿಸಿ ನಿರ್ಧರಿಸುವುದು. ಡಿಸೆಂಬರ್ ಮಾಹೆಯಲ್ಲಿ ನೀಡುವ ಕ್ರಿಸ್‌ಮಸ್ ರಜಾ ಅವಧಿಯನ್ನು ಅಕ್ಟೋಬರ್ ಮಾಹೆಯ ಮಧ್ಯಂತರ ರಜೆಯಲ್ಲಿ ಕಡಿತಗೊಳಿಸಿ ಸರಿದೂಗಿಸಿಕೊಳ್ಳಲು ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ಕ್ರಮವಹಿಸತಕ್ಕದ್ದು.
6. ರಾಜ್ಯ ಮಟ್ಟದ ಕನ್ನಡ ರಾಜ್ಯೋತ್ಸವ ಮತ್ತು ಮಕ್ಕಳ ಮೇಳ ಕಾರ್ಯಕ್ರಮಗಳನ್ನು ಆಯೋಜಿಸುವ ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) ರವರು ತಮ್ಮ ವ್ಯಾಪ್ತಿಯ ಶಾಲೆಗಳಿಗೆ ದಸರಾ ಮಧ್ಯಂತರ ರಜಾ ಅವಧಿಯನ್ನು ಅವಶ್ಯಕತೆಗನುಗಣವಾಗಿ ಮಾರ್ಪಡಿಸಿಕೊಳ್ಳುವುದರ ಮೂಲಕ ಶಾಲಾ ಕರ್ತವ್ಯದ ಅವಧಿಗಳ ಕೊರತೆ ಬಾರದ ರೀತಿಯಲ್ಲಿ ಕ್ರಮವಹಿಸತಕ್ಕದ್ದು.
7. ಮುಷ್ಕರ ಇನ್ನಿತರೆ ಅನಿರೀಕ್ಷಿತ ಕಾರಣಗಳಿಂದಾಗಿ ಶಾಲೆಗಳಿಗೆ ರಜೆ ಘೋಷಣೆಯಾದಲ್ಲಿ ಆ ಅವಧಿಯ ಶಾಲಾ ಕರ್ತವ್ಯದ ದಿನಗಳನ್ನು ಮುಂದಿನ ರಜಾ ದಿನಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಶಾಲೆಗಳನ್ನು ನಡೆಸುವುದರ ಮೂಲಕ ನಿಗದಿಪಡಿಸಿದ ಶಾಲಾ ಕರ್ತವ್ಯದ ದಿನಗಳು ಕಡಿಮೆಯಾಗದಂತೆ ಸರಿದೂಗಿಸಿಕೊಳ್ಳಲು ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ಕ್ರಮ ವಹಿಸುವುದು.
8. ಪರೀಕ್ಷಾ ದಿನಗಳು, ಮೌಲ್ಯಾಂಕನ ದಿನಗಳು ಹಾಗೂ ಪೂರಕ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುವ ದಿನಗಳನ್ನು ಕೂಡ ಶಾಲಾ ಕರ್ತವ್ಯದ ದಿನಗಳೆಂದು ನಿಗದಿತ ಅವಧಿಗಳಲ್ಲಿ ಪರಿಗಣಿಸುವುದು.
9. ಕೋವಿಡ್–19 ರ ಪ್ರತಿಕೂಲ ಸನ್ನಿವೇಶದ ಹಿನ್ನಲೆಯಲ್ಲಿ 2021–22 ನೇ ಶೈಕ್ಷಣಿಕ ಸಾಲಿನಲ್ಲಿ ಶಾಲೆಗಳನ್ನು ಭೌತಿಕವಾಗಿ ನಡೆಸಲು ಸಾಧ್ಯವಾಗದಿದ್ದಲ್ಲಿ ಸರ್ಕಾರದ / ಇಲಾಖೆಯ ಸೂಚನೆಯನುಸಾರ ಪರ್ಯಾಯ ಮಾರ್ಗಗಳನ್ನು ಕೈಗೊಳ್ಳುವುದರ ಮೂಲಕ ಶೈಕ್ಷಣಿಕವಾಗಿ ಹಿನ್ನಡೆಯಾಗದಂತೆ ಮೇಲ್ಕಂಡ ವಾರ್ಷಿಕ ಶೈಕ್ಷಣಿಕ ಚಟುವಟಿಕೆಗಳ ಕಾರ್ಯಸೂಚಿಯನ್ನು ಅನುಷ್ಠಾನಗೊಳಿಸುವುದು.

**ಆಯುಕ್ತರು,**
**ಸಾರ್ವಜನಿಕ ಶಿಕ್ಷಣ ಇಲಾಖೆ**

ಇವರಿಗೆ,

1. ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ/ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.

ಪ್ರತಿಯನ್ನು:–

1. ಮಾನ್ಯ ಘನತೆವೆತ್ತ ರಾಜ್ಯಪಾಲರ ಆಪ್ತ ಕಾರ್ಯದರ್ಶಿ ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹು ಮಹಡಿಗಳ ಕಟ್ಟಡ,ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.

4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ರವರಿಗೆ ಮಾಹಿತಿಗಾಗಿ,
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿರವರಿಗೆ ಕ್ರಮಕ್ಕಾಗಿ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
8. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ರವರಿಗೆ.
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರಾಂಶುಪಾಲರ ಮತ್ತು ಪ್ರೌಢ ಶಾಲಾ ಮುಖ್ಯಶಿಕ್ಷಕರ ಸಂಘ ಬೆಂಗಳೂರು.
10. ಅಧ್ಯಕ್ಷರು, ಕರ್ನಾಟಕ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ, ಬೆಂಗಳೂರು
11. ಅಧ್ಯಕ್ಷರು, ಕರ್ನಾಟಕ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು
12. ಸಾರ್ವಜನಿಕ ಸಂಪರ್ಕಾಧಿಕಾರಿಗಳು ಆಯುಕ್ತರ ಕಛೇರಿ, ಸಾರ್ವನಿಕ ಶಿಕ್ಷಣ ಇಲಾಖೆ, ಬೆಂಗಳೂರು
13. ಕಛೇರಿ ಪ್ರತಿ.